ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಡೂರು

ಸಿ.ಸಿ.1492/2016

| | | | |
|---|---|---|---|
| ಸಾಕ್ಷಿದಾರರ ಹೆಸರು | ಸಂತೋಷ ಶೆಟ್ಟಿ | ಪ್ರಮಾಣ ಮಾಡಿದ ದಿನಾಂಕ | 16.08.2022 |
| ತಂದೆಯ ಹೆಸರು | ಸಂಜೀವ ಶೆಟ್ಟಿ | | |
| ವಯಸ್ಸು | 40 ವರ್ಷ | | |
| ವೃತ್ತಿ | ವ್ಯಾಪಾರ | ಚಾಸಾ | 3 |
| ವಾಸಸ್ಥಳ | ಕಡೂರು | ಪ್ರಾಸಾ | 3 |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಸ್ಥಳ ಮಹಜರ್ ಆಗಿದ್ದು ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರ್ತಿಸಿದ್ದು ಅದನ್ನು ಈಗಾಗಲೇ ನಿಪಿ 1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1(ಸಿ) ಎಂದು ಗುರ್ತಿಸಲಾಯಿತು. ಯಾವಾಗ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ. ಸದರಿ ಸಹಿಯನ್ನು ನಮ್ಮ ಪಕ್ಕದ ಕಟ್ಟಡದಲ್ಲಿ ಮಾಡಿರುತ್ತೇನೆ. ನನ್ನ ಜೊತೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ಗೊತ್ತಿಲ್ಲ. ಮಹಜರನ್ನು ಎಷ್ಟು ಗಂಟೆಯಿಂದ ಎಷ್ಟು ಗಂಟೆವರೆಗೆ ಜರುಗಿಸಿರುತ್ತಾರೆ ಎಂದು ಗೊತ್ತಿಲ್ಲ. ನಿಪಿ-2 ರಲ್ಲಿ ತಾನು ಮತ್ತು ಸ್ವಾಮಿ ಎಂಬುವವರು ಇರುವುದಾಗಿ ನೋಡಿ ಗುರುತಿಸಿರುತ್ತಾರೆ. ನಿಪಿ-2 ಮತ್ತು 3 ರ ಛಾಯಾಚಿತ್ರಗಳನ್ನು ನಾನು ಟೀ ತೆಗೆದುಕೊಂಡು ಹೋದಾಗ ತೆಗೆದಿರುತ್ತಾರೆ, ಯಾವ ವಿಚಾರಕ್ಕೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)**

**ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-**

ದಿಃ30.12.2015 ರಂದು ಚಾಸಾ-1 ರವರು ಸ್ದಳ ತೋರಿಸಿದ ಮೇರೆಗೆ ಸಂಜೆ 4.30 ರಿಂದ 5.45 ರವರೆಗು ಚಾಸಾ-2 ಮತ್ತು ನನ್ನ ಸಮಕ್ಷಮ ಸ್ಥಳ ಪಂಚನಾಮೆಯನ್ನು ಕಳ್ಳತನವಾದ ಬಾಬ್ತು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ಮತ್ತು 3 ರ ಛಾಯಾಚಿತ್ರಗಳಲ್ಲಿ ಚಾಸಾ-2 ರವರು ಇರುತ್ತಾರೆ ಎಂದರೆ ಸರಿ. ಸದರಿ ಛಾಯಾಚಿತ್ರಗಳನ್ನು

ಪೋಲೀಸರು ಮಹಜರ್ ಕ್ರಮ ಜರುಗಿಸಲು ಬಂದಾಗ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಕುರಿತು ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಆರೋಪಿತರುಗಳ ಪರ ವಕೀಲರುಗಳು ಪಾಟೀ ಸವಾಲನ್ನು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸಹಿ/-
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಕಡೂರು